# National
# Kannada
# 05.10.2025 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಕೆಮ್ಮಿನ ಸಿರಪ್‌ನಿಂದ ಮಕ್ಕಳ ಸಾವುಗಳ ಕುರಿತಂತೆ ಕೇಂದ್ರ ಆರೋಗ್ಯ ಸಚಿವಾಲಯ ನೇತೃತ್ವದಲ್ಲಿ ಇಂದು ಸಂಜೆ ಮಹತ್ವದ ಸಭೆ

2. ವಿಶ್ವ ಶಿಕ್ಷಕರ ದಿನದ ಅಂಗವಾಗಿ ನವದೆಹಲಿಯಲ್ಲಿ ಫಿಟ್ ಇಂಡಿಯಾ ಸಂಡೇಸ್ ಆನ್ ಸೈಕಲ್ ವಿಶೇಷ ಆವೃತ್ತಿ ಆಯೋಜನೆ

3. ಬಿಹಾರದಲ್ಲಿ ಭಾರಿ ವರ್ಷಧಾರೆ; ಮಳೆ ಸಂಬಂಧಿತ ಅವಘಡಗಳಲ್ಲಿ ಕನಿಷ್ಠ ೧೯ ಜನರು ಸಾವು

4. ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್; ಕೊಲಂಬೊದಲ್ಲಿಂದು ಭಾರತ-ಪಾಕಿಸ್ತಾನ ಮುಖಾಮುಖಿ

<><><><>

ಕೆಮ್ಮಿನ ಸಿರಪ್‌ನಿಂದ ಮಕ್ಕಳ ಸಾವುಗಳ ಕುರಿತು ಚರ್ಚಿಸಲು ಕೇಂದ್ರ ಆರೋಗ್ಯ ಸಚಿವಾಲಯ ಇಂದು ಸಂಜೆ ೪ ಗಂಟೆಗೆ ಮಹತ್ವದ ಸಭೆ ನಡೆಸಲಿದೆ. ಸಭೆಯು ಆರೋಗ್ಯ ಸಚಿವಾಲಯದ ಕಾರ್ಯದರ್ಶಿಯವರ ನೇತೃತ್ವದಲ್ಲಿ ನಡೆಯಲಿದ್ದು, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಪ್ರಧಾನ ಕಾರ್ಯದರ್ಶಿಗಳು ಮತ್ತು ಆರೋಗ್ಯ ಕಾರ್ಯದರ್ಶಿಗಳು ಉಪಸ್ಥಿತರಿರಲಿದ್ದಾರೆ. ಇವರ ಜೊತೆಗೆ, ಪ್ರತಿ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶದ ಔಷಧ ನಿಯಂತ್ರಕರು ಸಹ ಹಾಜರಿರುತ್ತಾರೆ. ಕೆಮ್ಮಿನ ಸಿರಪ್‌ನ ದುರುಪಯೋಗ ಮತ್ತು ಔಷಧಿಗಳ ಗುಣಮಟ್ಟದ ಬಗ್ಗೆ ಚರ್ಚಿಸಲು ವೀಡಿಯೊ ಕಾನ್ಫರೆನ್ಸಿಂಗ್ ಮೂಲಕ ಸಭೆ ನಡೆಸಲಾಗುವುದು ಎಂದು ಮೂಲಗಳು ತಿಳಿಸಿವೆ. ಕೆಮ್ಮಿನ ಸಿರಪ್‌ಗಳ ತರ್ಕಬದ್ಧ ಮತ್ತು ವಿವೇಚನಾಯುಕ್ತ ಬಳಕೆ ಮತ್ತು ಔಷಧಿಗಳ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲು ಕ್ರಮಗಳ ಕುರಿತಂತೆಯೂ ಸಭೆಯಲ್ಲಿ ಚರ್ಚಿಸಲಾಗುವುದು.

<><><><>

ವಿಶ್ವ ಶಿಕ್ಷಕರ ದಿನದ ಅಂಗವಾಗಿ ನವದೆಹಲಿಯಲ್ಲಿ ನಡೆದ ಫಿಟ್ ಇಂಡಿಯಾ ಸಂಡೇಸ್ ಆನ್ ಸೈಕಲ್ ವಿಶೇಷ ಆವೃತ್ತಿಯಲ್ಲಿ ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಇಂದು ಭಾಗವಹಿಸಿದ್ದರು. ಇದರ ಭಾಗವಾಗಿ ಸಚಿವ ಡಾ. ಮಾಂಡವಿಯಾ ನೇತೃತ್ವದಲ್ಲಿ ಮೇಜರ್ ಧ್ಯಾನ್‌ಚಂದ್ ಕ್ರೀಡಾಂಗಣದಿಂದ ಇಂಡಿಯಾ ಗೇಟ್ ಮತ್ತು ಸುತ್ತಮುತ್ತಲಿನ

ಪ್ರದೇಶಗಳಿಗೆ ನೂರಾರು ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರೊಂದಿಗೆ ಸೈಕಲ್ ರ್‍ಯಾಲಿ ನಡೆಸಲಾಯಿತು. ಬಳಿಕ ಮಾತನಾಡಿದ ಸಚಿವರು, ಇಂದು ದೇಶಾದ್ಯಂತ ವಿವಿಧ ೧೦ ಸಾವಿರದ ೫೦೦ ಕ್ಕೂ ಹೆಚ್ಚು ಸ್ಥಳಗಳಲ್ಲಿ ಫಿಟ್ ಇಂಡಿಯಾ ಸಂಡೇಸ್ ಆನ್ ಸೈಕಲ್ ಆಯೋಜಿಸಲಾಗಿದ್ದು, ವಿಶೇಷವಾಗಿ ಶಿಕ್ಷಕರು ಭಾಗವಹಿಸಿದ್ದಾರೆ ಎಂದು ತಿಳಿಸಿದರು. ಪ್ರತಿ ಭಾನುವಾರ ಲಕ್ಷಾಂತರ ಜನರು ತಮ್ಮನ್ನು ತಾವು ಸದೃಢವಾಗಿರಿಸಿಕೊಳ್ಳಲು ಸೈಕಲ್ ಸವಾರಿ ಮಾಡುತ್ತಾರೆ ಮತ್ತು ಅದು ಅವರಿಗೆ ಜೀವನದಲ್ಲಿ ಸಮತೋಲನವನ್ನು ಕಾಪಾಡಿಕೊಳ್ಳುವ ಸಂದೇಶ ನೀಡಿದೆ ಎಂದು ಅವರು ಹೇಳಿದರು.

ಧ್ವನಿ - ಮನ್ಸುಖ್ ಮಾಂಡವೀಯ ( ಸೆಕೆಂಡ್ಸ್)

<><><><>

ಬಿಹಾರ ವಿಧಾನಸಭಾ ಚುನಾವಣೆಯ ಸಿದ್ಧತೆ ಕುರಿತು ಪಾಟ್ನಾದಲ್ಲಿ ವಿವಿಧ ಜಾರಿ ಸಂಸ್ಥೆಗಳ ಮುಖ್ಯಸ್ಥರು ಮತ್ತು ನೋಡಲ್ ಅಧಿಕಾರಿಗಳೊಂದಿಗೆ ಚುನಾವಣಾ ಆಯೋಗ ನಿರ್ಣಾಯಕ ಸಭೆ ನಡೆಸುತ್ತಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಚುನಾವಣಾ ಆಯುಕ್ತರಾದ ಡಾ. ಸುಖ್‌ಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರೊಂದಿಗೆ ಇಂದು ಪಾಟ್ನಾದಲ್ಲಿ ಮೊದಲ ಅಧಿವೇಶನದಲ್ಲಿ ವಿವಿಧ ಜಾರಿ ಸಂಸ್ಥೆಗಳ ಮುಖ್ಯಸ್ಥರು ಮತ್ತು ನೋಡಲ್ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಭೆ ನಡೆಸುತ್ತಿದ್ದಾರೆ. ಇಂದು ಚುನಾವಣಾ ಆಯೋಗದ ಬಿಹಾರ ಭೇಟಿಯ ಅಂತಿಮ ದಿನವಾಗಿದೆ. ಆದಾಯ ತೆರಿಗೆ ಇಲಾಖೆ, ಜಾರಿ ನಿರ್ದೇಶನಾಲಯ, ಕಸ್ಟಮ್ಸ್ ಇಲಾಖೆ, ಮಾದಕ ದ್ರವ್ಯ ನಿಯಂತ್ರಣ ಬ್ಯೂರೋ, ಬ್ಯಾಂಕುಗಳು ಮತ್ತು ರೈಲ್ವೆಗಳು ಸೇರಿದಂತೆ ಇತರ ಜಾರಿ ಸಂಸ್ಥೆಗಳ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದಾರೆ. ಬಿಹಾರದ ಪೊಲೀಸ್ ಮಹಾನಿರ್ದೇಶಕರ ಸಮ್ಮುಖದಲ್ಲಿ, ರಾಜ್ಯ ಪೊಲೀಸ್ ಮತ್ತು ಕೇಂದ್ರ ಸಶಸ್ತ್ರ ಪ್ಯಾರಾ ಮಿಲಿಟರಿ ಪಡೆಗಳ ನೋಡಲ್ ಅಧಿಕಾರಿಗಳೊಂದಿಗೆ ಚುನಾವಣಾ ಆಯೋಗ ಬಿಹಾರದಲ್ಲಿ ಭದ್ರತೆ, ಕಾನೂನು ಮತ್ತು ಸುವ್ಯವಸ್ಥೆ ಅಂಶವನ್ನು ನಿರ್ಣಯಿಸುತ್ತಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಬಿಹಾರದ ಮುಖ್ಯ ಕಾರ್ಯದರ್ಶಿ, ಪೊಲೀಸ್ ಮಹಾನಿರ್ದೇಶಕರು ಮತ್ತು ಮುಖ್ಯ ಚುನಾವಣಾ ಅಧಿಕಾರಿಯೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆಯನ್ನು ನಡೆಸಲಿದ್ದಾರೆ. ಎರಡು ದಿನಗಳ ಪರಿಶೀಲನಾ ಸಭೆಗಳು ಮತ್ತು ವಿವಿಧ ಪಾಲುದಾರರೊಂದಿಗೆ  ಸಮಾಲೋಚನೆಗಳ ನಂತರ, ಚುನಾವಣಾ ಆಯೋಗವು ಇಂದು ಮಧ್ಯಾಹ್ನ ತನ್ನ ಅವಲೋಕನಗಳು ಮತ್ತು ತೀರ್ಮಾನಗಳ ಬಗ್ಗೆ ಸುದ್ದಿಗೋಷ್ಠಿಯ ಮೂಲಕ ಮಾಹಿತಿ ನೀಡಲಿದೆ.

<><><><>

ಭಾರತದಲ್ಲಿ ಆರು ವರ್ಷಗಳಲ್ಲಿ ಸುಮಾರು ೧೭ ಕೋಟಿ ಉದ್ಯೋಗಗಳು ಕಾರ್ಯಪಡೆಗೆ ಸೇರ್ಪಡೆಯಾಗಿವೆ. ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ಪ್ರಕಾರ, ಭಾರತದಲ್ಲಿ ಉದ್ಯೋಗ ೨೦೧೭-೧೮ರಲ್ಲಿ ೪೭ ಕೋಟಿ ೫೦ ಲಕ್ಷದಿಂದ ೨೦೨೩-೨೪ರಲ್ಲಿ ೬೪ ಕೋಟಿ ೩೩ ಲಕ್ಷಕ್ಕೆ ಏರಿದೆ, ಆರು ವರ್ಷಗಳಲ್ಲಿ ೧೬ ಕೋಟಿ ೮೩ ಲಕ್ಷ ಉದ್ಯೋಗಗಳ ನಿವ್ವಳ ಸೇರ್ಪಡೆಯಾಗಿದೆ. ಇದಲ್ಲದೆ, ನಿರುದ್ಯೋಗ ದರ ೨೦೧೭-೧೮ರಲ್ಲಿ ಶೇಕಡಾ ೬ ರಿಂದ ೨೦೨೩-೨೪ರಲ್ಲಿ ಶೇಕಡಾ ೩.೨ ಕ್ಕೆ ಗಮನಾರ್ಹವಾಗಿ ಇಳಿದಿದೆ. ಯುವ ನಿರುದ್ಯೋಗ ದರ ಅದೇ ಸಮಯದಲ್ಲಿ ಶೇಕಡ ೧೭.೮ ರಿಂದ ೧೦.೨ ಪ್ರತಿಶತಕ್ಕೆ ಇಳಿದಿದೆ, ಇದು ಜಾಗತಿಕ ಸರಾಸರಿ ೧೩.೩ ಪ್ರತಿಶತಕ್ಕಿಂತ ಕಡಿಮೆಯಾಗಿದೆ. ಏತನ್ಮಧ್ಯೆ, ಮಹಿಳೆಯರು ಕಾರ್ಯಪಡೆಯ ಏರಿಕೆಗೆ ಕಾರಣರಾಗಿದ್ದಾರೆ, ಕಳೆದ ಏಳು ವರ್ಷಗಳಲ್ಲಿ ೧ ಕೋಟಿ ೫೬ ಲಕ್ಷಕ್ಕೂ ಹೆಚ್ಚು ಮಹಿಳೆಯರು ಉದ್ಯೋಗ ವಲಯಕ್ಕೆ ಸೇರುತ್ತಿದ್ದಾರೆ. ೨೦೨೩-೨೪ರಲ್ಲಿ ಸ್ವ-ಉದ್ಯೋಗ ಶೇಕಡಾ ೫೮.೪ ಕ್ಕೆ ಏರಿಕೆಯಾಗಿದೆ. ಈ ಬೆಳವಣಿಗೆಗೆ ನವೋದ್ಯಮಗಳು ಮತ್ತು ಜಾಗತಿಕ ಸಾಮರ್ಥ್ಯ ಕೇಂದ್ರ- ಜಿಸಿಸಿಗಳು ಪ್ರಮುಖ ಚಾಲಕ ಶಕ್ತಿ ಎಂದು ಸಚಿವಾಲಯ ತಿಳಿಸಿದೆ, ಈ ಬೆಳವಣಿಗೆಗೆ ಸ್ಕಿಲ್ ಇಂಡಿಯಾ, ಉದ್ಯೋಗ ಮೇಳಗಳು, ಪಿಎಂ ವಿಶ್ವಕರ್ಮ ಯೋಜನೆ, ಮನ್ರೇಗಾ, ಪಿಎಂ ವಿಕಸಿತ ಭಾರತ ರೋಜ್‌ಗಾರ್ ಯೋಜನೆ ಮತ್ತು ಲಖ್‌ಪತಿ ದೀದಿ ಯೋಜನೆ ಸೇರಿದಂತೆ ಮುಂತಾದ ಉಪಕ್ರಮಗಳು ಕಾರಣವೆಂದು ಹೇಳಲಾಗಿದೆ.

<><><><>

ಬಿಹಾರದಾದ್ಯಂತ ಭಾರೀ ಮಳೆಯಾಗುತ್ತಿದ್ದು, ಕಳೆದ ೨೪ ಗಂಟೆಗಳಲ್ಲಿ ಸಿಡಿಲು ಮತ್ತು ಮಳೆ ಸಂಬಂಧಿತ ಘಟನೆಗಳಲ್ಲಿ ಕನಿಷ್ಠ ೧೬ ಜನರು ಸಾವನ್ನಪ್ಪಿದ್ದಾರೆ. ಮುಜಫರ್‌ಪುರ ಜಿಲ್ಲೆಯಲ್ಲಿ ನಾಲ್ಕು ಸಾವುಗಳು ಸಂಭವಿಸಿದ್ದು, ಜೆಹಾನಾಬಾದ್‌ನಲ್ಲಿ ಮೂವರು ಸಾವನ್ನಪ್ಪಿದ್ದಾರೆ. ಮುಖ್ಯಮಂತ್ರಿ ನಿತೀಶ್ ಕುಮಾರ್ ಜೀವಹಾನಿಗೆ ದುಃಖ ವ್ಯಕ್ತಪಡಿಸಿದ್ದಾರೆ. ಇಂದು ರಾಜ್ಯದ ಹಲವಾರು ಭಾಗಗಳಲ್ಲಿ ಭಾರೀ ಮಳೆಯಾಗುವ ಎಚ್ಚರಿಕೆಯನ್ನು ಹವಾಮಾನ ಇಲಾಖೆ ನೀಡಿದೆ. ಈ ನಡುವೆ ಅರಬ್ಬಿ ಸಮುದ್ರದಲ್ಲಿ 'ಶಕ್ತಿ' ಚಂಡಮಾರುತ ತೀವ್ರಗೊಂಡು, ಮುಂದಿನ ಕೆಲವು ದಿನಗಳಲ್ಲಿ ಗುಡುಗು ಸಹಿತ ಮಳೆ, ಮಿಂಚು ಮತ್ತು ಬಲವಾದ ಗಾಳಿ ಬೀಸುವ ನಿರೀಕ್ಷೆಯಿರುವುದರಿಂದ, ಭಾರತೀಯ ಹವಾಮಾನ ಇಲಾಖೆ ಮಹಾರಾಷ್ಟ್ರಕ್ಕೆ ಚಂಡಮಾರುತದ ಎಚ್ಚರಿಕೆಯನ್ನು ನೀಡಿದೆ.ಅಪಾಯಕಾರಿ ಪರಿಸ್ಥಿತಿಗಳಿಂದಾಗಿ ವಾಯುವ್ಯ ಅರಬ್ಬಿ ಸಮುದ್ರಕ್ಕೆ ಇಳಿಯದಂತೆ ಮೀನುಗಾರರಿಗೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

<><><><>

ಭಾರತೀಯ ಹವಾಮಾನ ಇಲಾಖೆ  ಇಂದು ಉತ್ತರ ಬಿಹಾರ, ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನಲ್ಲಿ ಅತಿ ಹೆಚ್ಚು ಮಳೆಯಾಗುವ ಮುನ್ಸೂಚನೆ ನೀಡಿದೆ. ಇಂದು ಅರುಣಾಚಲ ಪ್ರದೇಶ, ಅಸ್ಸಾಂ ಮತ್ತು ಮೇಘಾಲಯ ಸೇರಿದಂತೆ ಈಶಾನ್ಯ ಭಾರತದಾದ್ಯಂತ ವಾರವಿಡೀ ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಇದೆ  ಪರಿಸ್ಥಿತಿಗಳು ನಾಳೆ ತಮಿಳುನಾಡು, ಕೇರಳ ಮತ್ತು ಮಾಹೆಯ ಕೆಲವು ಭಾಗಗಳಲ್ಲಿಯೂ ಮುಂದುವರಿಯುತ್ತದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಏತನ್ಮಧ್ಯೆ, ದೇಶದ ಉತ್ತರ ಭಾಗದಲ್ಲಿ, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಪಶ್ಚಿಮ ರಾಜಸ್ಥಾನ, ಹಿಮಾಚಲ ಪ್ರದೇಶ ಮತ್ತು ಪಂಜಾಬ್‌ನಲ್ಲಿ ನಾಳೆಯವರೆಗೆ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಇಂದು ದೆಹಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ  ಗಂಟೆಗೆ ೫೦ ಕಿಲೋಮೀಟರ್‌ಗಳವರೆಗೆ ಬಿರುಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

<><><><>

ಅಮೆರಿಕ ಪ್ರಸ್ತಾಪಿಸಿದ ಗಾಜಾ ಕದನ ವಿರಾಮ ಒಪ್ಪಂದವನ್ನು ಅಂತಿಮಗೊಳಿಸಲು ಹಮಾಸ್, ಇಸ್ರೇಲ್ ಮತ್ತು ಅಮೆರಿಕಾದ ಸಮಾಲೋಚಕರು ಇಂದು ಕೈರೋದಲ್ಲಿ ಮಾತುಕತೆಗಳನ್ನು ಪ್ರಾರಂಭಿಸಲಿದ್ದಾರೆ. ಇಸ್ರೇಲ್ ಮತ್ತು ಹಮಾಸ್‌ನ ನಿಯೋಗಗಳು ಪ್ಯಾಲೆಸ್ಟೀನಿಯನ್ ಕೈದಿಗಳಿಗೆ ಇಸ್ರೇಲಿ ಒತ್ತೆಯಾಳುಗಳ ವಿನಿಮಯದ ಕುರಿತು ಚರ್ಚಿಸಲಿವೆ ಎಂದು ಈಜಿಪ್ಟ್‌ನ ವಿದೇಶಾಂಗ ಸಚಿವಾಲಯ ತಿಳಿಸಿದೆ. ಹಮಾಸ್ ಮತ್ತು ಇಸ್ರೇಲಿ ಅಧಿಕಾರಿಗಳು ಇಂದು ಮತ್ತು ನಾಳೆ ಪರೋಕ್ಷ ಮಾತುಕತೆ ನಡೆಸಲಿದ್ದಾರೆ ಎಂದು ಈಜಿಪ್ಟ್‌ನ ಸರ್ಕಾರಿ ಮಾಧ್ಯಮ ವರದಿ ಮಾಡಿದೆ. ಏತನ್ಮಧ್ಯೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಶಾಂತಿ ನೀತಿಗೆ ಅವಕಾಶ ನೀಡಲು, ಇಸ್ರೇಲ್, ಬಾಂಬ್ ದಾಳಿಯನ್ನು ತಾತ್ಕಾಲಿಕವಾಗಿ ನಿಲ್ಲಿಸಿದೆ ಎಂದು ಹೇಳಿದ್ದರೂ, ಗಾಜಾದಾದ್ಯಂತ ಇಸ್ರೇಲ್ ದಾಳಿಗಳಿಂದಾಗಿ ಕಳೆದ ೨೪ ಗಂಟೆಗಳಲ್ಲಿ ಕನಿಷ್ಠ ೭೦ ಪ್ಯಾಲೆಸ್ಟೀನಿಯನ್ನರು ಪ್ರಾಣ ಕಳೆದುಕೊಂಡಿದ್ದಾರೆ, ಇಸ್ರೇಲ್ ತನ್ನ ಪ್ಯಾಲೆಸ್ಟೀನಿಯನ್ನರ ಮೇಲಿನ ದಾಳಿಯನ್ನು ಮುಂದುವರಿಸಿದೆ ಎಂದು ಹಮಾಸ್ ಹೇಳಿಕೆಯಲ್ಲಿ ತಿಳಿಸಿದೆ.

<><><><>

ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್‌ನಲ್ಲಿ, ಭಾರತದ ವನಿತೆಯರ ತಂಡ ಇಂದು ಕೊಲಂಬೊದ ಆರ್ ಪ್ರೇಮದಾಸ ಕ್ರೀಡಾಂಗಣದಲ್ಲಿ ಪಂದ್ಯಾವಳಿಯ ತನ್ನ ಎರಡನೇ ಪಂದ್ಯದಲ್ಲಿ ಪಾಕಿಸ್ತಾನವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩ ಗಂಟೆಗೆ ಕ್ಕೆ ಆರಂಭವಾಗಲಿದೆ. ಭಾರತದ ವನಿತೆಯರು ಡಕ್ವರ್ತ್ ಲೂಯಿಸ್ ವಿಧಾನದ ಮೂಲಕ ಶ್ರೀಲಂಕಾವನ್ನು ೫೯ ರನ್‌ಗಳಿಂದ ಸೋಲಿಸಿ ತಮ್ಮ ಮೊದಲ ಪಂದ್ಯದಲ್ಲಿ ಜಯಗಳಿಸಿದರು.

ಮತ್ತೊಂದೆಡೆ, ಪಾಕಿಸ್ತಾನವು ತನ್ನ ಮೊದಲ ಪಂದ್ಯದಲ್ಲಿ ಬಾಂಗ್ಲಾದೇಶದ ವಿರುದ್ಧ ಏಳು ವಿಕೆಟ್‌ಗಳ ಸೋಲನ್ನು ಅನುಭವಿಸಿತು. ಭಾರತವು ಪಾಕಿಸ್ತಾನದ ವಿರುದ್ಧ ಏಕದಿನ ಪಂದ್ಯಗಳಲ್ಲಿ ೧೧-೦ ಗೆಲುವಿನ ದಾಖಲೆಯನ್ನು ಹೊಂದಿದೆ. ಭಾರತಕ್ಕೆ, ಈ ಪಂದ್ಯ ಸೆಮಿಫೈನಲ್ ಅರ್ಹತೆಯತ್ತ ಒಂದು ಹೆಜ್ಜೆಯಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>